ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ,
ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸ ಸೌಧ,
ಡಾ. ಬಿ. ಆರ್. ಅಂಬೇಡ್ಕರ್ ರಸ್ತೆ
ಬೆಂಗಳೂರು –560001.

ಸಂಖ್ಯೆ: ಸಿಐ 76 ಎಸ್‌ಎಸ್‌ಐ 2019

ದಿನಾಂಕ: 16.02.2021

# ತಿದ್ದುಪಡಿ ಆದೇಶ

ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 76 ಎಸ್‌ಎಸ್‌ಐ 2019 ದಿನಾಂಕ: 28.05.2020ರಲ್ಲಿ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದ ಉದ್ದಿಮೆದಾರರಿಗೆ ಕೈಗಾರಿಕಾ ನಿವೇಶನ/ ಶೆಡ್ ಗಳನ್ನು ನೀಡುವಲ್ಲಿ ಹಾಲಿ ಇರುವ ಸಹಾಯಧನವನ್ನು ಶೇ.50 ರಿಂದ ಶೇ.75ಕ್ಕೆ ಹೆಚ್ಚಿಸಿ ಜಾರಿಗೊಳಿಸಲಾಗಿದ್ದು, ಸದರಿ ಆದೇಶದಲ್ಲಿ ವಿಧಿಸಲಾಗಿರುವ ಷರತ್ತು ಮತ್ತು ನಿಬಂಧನೆಗಳನ್ನು ಈ ಕೆಳಕಂಡಂತೆ ಮಾರ್ಪಡಿಸಿ ತಿದ್ದುಪಡಿ ಆದೇಶವನ್ನು ಈ ಮೂಲಕ ಹೊರಡಿಸಲಾಗಿದೆ:

1) ಶೇ.75 ರಷ್ಟು ಭೂ ಸಹಾಯಧನ ಸೌಲಭ್ಯವನ್ನು 2019-20ನೇ ಸಾಲಿನಿಂದ KIADB ಹಾಗೂ KSSIDC ಸಂಸ್ಥೆಗಳಿಂದ ಭೂ ಹಂಚಿಕೆ ಪಡೆದಿರುವ ಹಂಚಿಕೆದಾರರಿಗೆ ಪೂರ್ವಾನ್ವಯವಾಗಿ ದಿನಾಂಕ 01.04.2019ರಿಂದ ನೀಡುವುದು.

2) ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ ಯಿಂದ ಫಲಾನುಭವಿಯೊಬ್ಬರಿಗೆ ಗರಿಷ್ಠ 2 ಎಕರೆ ಜಮೀನನ್ನು ಶೇ.75ರಷ್ಟು ರಿಯಾಯಿತಿ ದರದಲ್ಲಿ ನೀಡಬಹುದು.

3) ಕರ್ನಾಟಕ ಸಣ್ಣ ಕೈಗಾರಿಕೆ ಅಭಿವೃದ್ಧಿ ನಿಗಮದಿಂದ ನಿವೇಶನ/ ಶೆಡ್ ಗಳ ಮೇಲೆ ನೀಡುವ ರಿಯಾಯಿತಿಯು ಒಟ್ಟು ದರದ ಶೇ.75 ರಷ್ಟು ಆಗಿರುತ್ತದೆ.

4) ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ/ ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕಾಭಿವೃದ್ಧಿ ನಿಗಮ ನಿಯಮಿತ ಗಳಿಂದ ಹಂಚಿಕೆ ಮಾಡಿ ನಿವೇಶನ/ ಶೆಡ್ ನ ಶೇ.75ರಷ್ಟು ರಿಯಾಯಿತಿ ಪರಿಗಣಿಸಿ ಉಳಿದ ಮೊತ್ತ ಪಾವತಿಸಲು ಫಲಾನುಭವಿಗೆ ಹಂಚಿಕೆ ಪತ್ರ ನೀಡಬೇಕು. ಹಂಚಿಕೆ ಪತ್ರದಲ್ಲಿ ನಮೂದಿಸಿದ ಬಾಕಿ (ಶೇ.25) ಮೊತ್ತದ ಶೇ.10 ರಷ್ಟು ಮೊತ್ತ ಪಾವತಿಸಿದ ನಂತರ ನಿವೇಶನವನ್ನು ಫಲಾನುಭವಿಗೆ ಸ್ವಾಧೀನ ಪತ್ರದ ಮೂಲಕ ನೀಡುವುದು. ಉಳಿದ ಶೇ.15 ರಷ್ಟು ಮೊತ್ತವನ್ನು ಸ್ವಾಧೀನ ಪತ್ರ ವಿತರಿಸಿದ ದಿನಾಂಕದಿಂದ 8 ತ್ರೈಮಾಸಿಕ ಸಮ ಕಂತುಗಳಲ್ಲಿ ಬಡ್ಡಿ ಸಹಿತವಾಗಿ ಪಡೆಯಬೇಕು. ಫಲಾನುಭವಿಯು ಸಲ್ಲಿಸಿದ ಜಾತಿ ಪ್ರಮಾಣ ಪತ್ರದ ಪ್ರತಿ, ಆಧಾರ್ ಸಂಖ್ಯೆ ದಾಖಲಾತಿ ಮತ್ತು ಸ್ವಾಧೀನ ನೀಡಲಾದ ಪತ್ರದ ಪ್ರತಿಯನ್ನು ದೃಢೀಕರಿಸಿ ಸದರಿ ಮಂಡಳಿ/ ನಿಗಮದ ಕಚೇರಿಯಲ್ಲಿಯೇ ನಿರ್ವಹಿಸುವುದು ಹಾಗೂ ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಗೆ ಫಲಾನುಭವಿಯ ವಿವರಗಳೊಂದಿಗೆ ಪ್ರಸ್ತಾವನೆ ಸಲ್ಲಿಸುವುದು.

Scanned with CamScanner

5) ಪ್ರಸ್ತಾವನೆಯನ್ನು ಪರಿಶೀಲಿಸಿ ಉದ್ದಿಮೆದಾರರು ಈಗಾಗಲೇ ಸ್ವಾಧೀನ ಪಡೆದಿರುವ ನಿವೇಶನ/ ಶೆಡ್ ಗಳಿಗೆ ನಿಯಮಾವಳಿಯಂತೆ ಅರ್ಹವಿರುವ ಶೇ.75 ರಷ್ಟು ರಿಯಾಯಿತಿ ಮೊತ್ತವನ್ನು ಸರ್ಕಾರದಿಂದ ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ/ ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕಾಭಿವೃದ್ಧಿ ನಿಗಮ ನಿಯಮಿತ ಗೆ ಮರುಪಾವತಿ ಮಾಡಲಾಗುವುದು.

6) ಶೇ.75 ರಷ್ಟು ರಿಯಾಯಿತಿ ಮೌಲ್ಯವನ್ನು ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಯ ವಿಶೇಷ ಘಟಕ ಯೋಜನೆ/ ಗಿರಿಜನ ಉಪಯೋಜನೆ (SCSP/TSP) ಅಡಿಯಲ್ಲಿ ಹಂಚಿಕೆಯಾಗುವ ಆಯವ್ಯಯದಿಂದ ಭರಿಸತಕ್ಕದ್ದು ಮತ್ತು SCSP/TSP ಯೋಜನೆಯಡಿಯಲ್ಲಿ ಈ ಕಾರ್ಯಕ್ರಮಕ್ಕೆ ರೂಪಿಸಲಾಗಿರುವ ಮಾರ್ಗಸೂಚಿಗಳನ್ನು ಪಾಲಿಸತಕ್ಕದ್ದು.

7) ತದನಂತರ ಉಪಯುಕ್ತತಾ ಪ್ರಮಾಣ ಪತ್ರವನ್ನು ಕೇಂದ್ರ ಕಚೇರಿಗೆ ಸಲ್ಲಿಸುವುದು.

ಸದರಿ ಆದೇಶವನ್ನು ಮಾನ್ಯ ಮುಖ್ಯಮಂತ್ರಿಯವರ ಅನುಮೋದನೆ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

Rlatha

**(ಆರ್ .ಲತಾ)**
ಪೀಠಾಧಿಕಾರಿ (ಸಪ್ರಕೈ)
ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ.

**ಇವರಿಗೆ:**

**ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು ಇವರಿಗೆ ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಲು ಕೋರಿ ಕಳುಹಿಸಲಾಗಿದೆ. ತದನಂತರ, ಪ್ರಕಟಗೊಂಡ ಸಂಚಿಕೆಗಳ 25 ಪ್ರತಿಗಳನ್ನು ಸರ್ಕಾರಕ್ಕೆ ಸಲ್ಲಿಸುವಂತೆ ಕೋರಲಾಗಿದೆ.**

ಪ್ರತಿಯನ್ನು:

1. ಪ್ರಧಾನ ಮಹಾಲೇಖಪಾಲರು (ಜಿ & ಎಸ್ಎಸ್ಎ) ಕರ್ನಾಟಕ, ಹೊಸ ಕಟ್ಟಡ, 'ಆಡಿಟ್ ಭವನ', ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು-560001.
2. ಪ್ರಧಾನ ಮಹಾಲೇಖಪಾಲರು (ಇ & ಆರ್ ಎಸ್ ಎ) ಕರ್ನಾಟಕ, ಹೊಸ ಕಟ್ಟಡ, 'ಆಡಿಟ್ ಭವನ', ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು-560001.
3. ಪ್ರಧಾನ ಮಹಾಲೇಖಪಾಲರು (ಎ & ಇ) ಕರ್ನಾಟಕ, ಪಾ9ರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ: 5329, ಬೆಂಗಳೂರು-560001.
4. ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು-01.

Scanned with CamScanner

5. ಸರ್ಕಾರದ ಪ್ರಧಾನ ಕಾರ್ಯದರ್ಶಿ ,ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ, ವಿಕಾಸಸೌಧ, ಬೆಂಗಳೂರು-01
6. ಸರ್ಕಾರದ ಪ್ರಧಾನ ಕಾರ್ಯದರ್ಶಿ (ಎಂ ಎಸ್ ಎಂ ಇ, ಗಣಿ ಮತ್ತು ಗಣಿ), ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ, ವಿಕಾಸಸೌಧ, ಬೆಂಗಳೂರು-01.
7. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು-01.
8. ಆಯುಕ್ತರು, ಕೈಗಾರಿಕಾಭಿವೃದ್ಧಿ, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಖನಿಜ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು-1.
9. ನಿರ್ದೇಶಕರು (ಎಂ.ಎಸ್.ಎಂ.ಇ), ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಖನಿಜ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು-1.
10. ಮುಖ್ಯ ಕಾರ್ಯನಿರ್ವಹಣಾಧಿಕಾರಿ ಹಾಗೂ ಕಾರ್ಯ ನಿರ್ವಾಹಕ ಸದಸ್ಯರು, ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ (KIADB), ರಾಷ್ಟ್ರೋತ್ಥಾನ ಪರಿಷತ್ ಭವನ, ನೃಪತುಂಗ ರಸ್ತೆ, ಬೆಂಗಳೂರು-01.
11. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮ ನಿಯಮಿತ (KSSIDC), ಕೈಗಾರಿಕಾ ವಸಾಹತು, ರಾಜಾಜಿನಗರ, ಬೆಂಗಳೂರು.
12. ಹಿರಿಯ ನಿರ್ದೇಶಕರು (ಪಿಎಫ್ಆರ್), ಯೋಜನಾ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು-1.
13. ನಿರ್ದೇಶಕರು, ಖಜಾನೆ ಇಲಾಖೆ, ವಿಶ್ವೇಶ್ವರಯ್ಯ ಮುಖ್ಯ ಗೋಪುರ, ಬೆಂಗಳೂರು-1.
14. ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರ ಆಪ್ತ ಕಾರ್ಯದರ್ಶಿ,ವಿಧಾನಸೌಧ, ಬೆಂಗಳೂರು-01.
15. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-1), ವಿಧಾನಸೌಧ, ಬೆಂಗಳೂರು-01.
16. ಸರ್ಕಾರದ ಅಧೀನ ಕಾರ್ಯದರ್ಶಿ(ಸಮನ್ವಯ), ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ, ವಿಕಾಸಸೌಧ, ಬೆಂಗಳೂರು-01.(ಮಲ್ಟಿಗ್ರಾಫ್ ಹಾಗೂ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಿಗೆ ಕಳುಹಿಸುವ ಸಲುವಾಗಿ)
17. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

Scanned with CamScanner